**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.669/2020**

| | | |
|---|---|---|
| ಸಾಕ್ಷಿದಾರರ ಹೆಸರು | : ಉಮೇಶ್ | ಫ್ರಾಸಾ -4 |
| ತಂದೆಯ ಹೆಸರು | : ಚಂದ್ರು | ಚಾಸಾ-4 |
| ವಯಸ್ಸು | : 40 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಚಾಲಕ | ದಿನಾಂಕಃ04.03.2025 |
| ವಾಸಸ್ಥಳ | : ಸಕಲೇಶಪುರ | |

**:ಮುಖ್ಯ ವಿಚಾರಣೆ ಫ್ರಾಜ್ಞ್ಯಾಸ.ಸ.ಅ. ರವರಿಂದ:**

ನ್ಯಾಯಾಲಯದ ಮುಂದಿರುವ 3 ಮತ್ತು 6 ನೇ ಆರೋಪಿತರ ಪರಿಚಯ ನನಗಿಲ್ಲ. 1, 2, 4 ಮತ್ತು 5 ನೇ ಆರೋಪಿತರ ಪರಿಚಯ ನನಗಿಲ್ಲ. ಸದರಿ ಆರೋಪಿತರು ಗೈರು ಹಾಜರಿದ್ದು ಅವರು ಗುರುತುವಿಕೆಯಲ್ಲಿ ತಕರಾರು ಇಲ್ಲ ಎಂದು ಆರೋಪಿತರ ಪರವಾಗಿ ವಕೀಲರು ತಿಳಿಸುತ್ತಾರೆ.

ಸಾಕ್ಷಿಯು ನಿಪಿ-3 ರಿಂದ 8 ರ ಪೋಟೋಗಳಲ್ಲಿ ತಾವು ಇರುವ ಬಗ್ಗೆ ಗುರುತಿಸುತ್ತಾರೆ. ಸದರಿ ಪೋಟೊವನ್ನು ಎಲ್ಲಿ ಹಾಗೂ ಯಾವ ವಿಚಾರಕ್ಕೆ ತೆಗೆಯಲಾಗಿದೆ ಎಂದು ನನಗೆ ಗೊತ್ತಿಲ್ಲ. ಸದರಿ ಪೋಟೋಗಳಲ್ಲಿ ಕಾಣುವ ಲಾರಿಯ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ಈಗ ನೋಡುತ್ತಿರುವ ನಿಪಿ-2 ರಲ್ಲಿ ನನ್ನ ಸಹಿ ಇಲ್ಲ. ನನಗೆ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಫ್ರಾಜ್ಞ್ಯಾಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಫ್ರಾಜ್ಞ್ಯಾಸ.ಸ.ಅ. ರವರಿಂದ:**

ಸಾಕ್ಷಿಗೆ ನಿಪಿ-2 ರ ಮಹಜರ್ ನಲ್ಲಿನ ಸಂಪೂರ್ಣ ವಿಚಾರವನ್ನು ಓದಿ ಹೇಳಿದ್ದು ಸಾಕ್ಷಿಯು ಸದರಿ ವಿಚಾರವನ್ನು ಅಲ್ಲಗಳೆಯುತ್ತಾರೆ. ನಿಪಿ-2 ರ ಮಹಜರ್ ಕಾಲಕ್ಕೆ ನಿಪಿ-3 ರಿಂದ 8 ರ ಪೋಟಗೋಗಳಲ್ಲಿ ಕಾಣುವ ಲಾರಿಯನ್ನು ಪೋಲೀಸರು ವಶಕ್ಕೆ ಪಡೆದಿದ್ದಾರೆ ಎಂದರೆ ಸರಿಯಲ್ಲ.

ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿತರ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.